# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ: DPI-CPI0C4-8(OTRS)/53/2022-SEC-EST4-/E- 935664 ದಿನಾಂಕ:21-11-2022

**-:ಸುತ್ತೋಲೆ:-**

**ವಿಷಯ** ನವೆಂಬರ್ 26ನೇ ದಿನವನ್ನು ಸಂವಿಧಾನ ದಿನವನ್ನಾಗಿ ಆಚರಿಸುವ ಕುರಿತು

**ಉಲ್ಲೇಖ1.** ಮಾನ್ಯ ಸಚಿವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ರವರ ಟಿಪ್ಪಣಿ ಸಂಖ್ಯೆ:12045/2022 ದಿನಾಂಕ:18.11.2022

**2.** ಭಾರತ ಸರ್ಕಾರ, ಶಿಕ್ಷಣ ಸಚಿವಾಲಯ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಇವರ ಪತ್ರ D.O.F.10-35/2022-SCH.4(Pt.1) ದಿನಾಂಕ:15.11.2022

********

ವಿಷಯಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷ ನವೆಂಬರ್ 26 ಈ ದಿನವನ್ನು **"ಭಾರತ ಸಂವಿಧಾನ"**ವು ಭಾರತದ ಸಂವಿಧಾನ ಸಭೆಯಲ್ಲಿ ಅಂಗೀಕರಿಸಲ್ಪಟ್ಟ ದಿನವಾದ 26ನೇ ನವೆಂಬರ್ 1949ರ ಸವಿನೆನಪಿಗಾಗಿ ಸಂವಿಧಾನ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಮುಂದುವರೆದು ಉಲ್ಲೇಖಿತ (2)ರಲ್ಲಿ ಭಾರತ ಸರ್ಕಾರದ, ಶಿಕ್ಷಣ ಸಚಿವಾಲಯ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪತ್ರದಲ್ಲಿ ಸೂಚಿಸಿರುವಂತೆ ಭಾರತದ ಸಂವಿಧಾನದಲ್ಲಿ ಪ್ರತಿಪಾದಿಸಲಾದ ಮೌಲ್ಯಗಳು ಮತ್ತು ತತ್ವಗಳ ಅರಿವನ್ನು ಮೂಡಿಸುವಂತಹ **Know Your Constitution** ಕಾರ್ಯಕ್ರಮವನ್ನು ಶಾಲಾ ಹಂತದಲ್ಲಿ ರಾಜ್ಯದ ಸರ್ಕಾರಿ, ಅನುದಾನಿತ, ಅನುದಾನರಹಿತ ಶಾಲೆಗಳಲ್ಲಿ ಆಯೋಜಿಸಲು ಸೂಚಿಸಿರುತ್ತಾರೆ.

ಉಲ್ಲೇಖ (1) ರಲ್ಲಿ ಮಾನ್ಯ ಸಚಿವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರು ದಿನಾಂಕ:26.11.2022ರಂದು ಬೆಳಿಗ್ಗೆ 11:00 ಗಂಟೆಗೆ ಏಕಕಾಲಕ್ಕೆ ಸಂವಿಧಾನದ ಪೀಠಿಕೆಯನ್ನು ಓದುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಸೂಚಿಸಿರುತ್ತಾರೆ, ಆದ್ದರಿಂದ ದಿನಾಂಕ:26.11.2022 "ಸಂವಿಧಾನ ದಿನಾಚರಣೆ" ಅಂಗವಾಗಿ ಶಾಲೆಯಲ್ಲಿ ಈ ಕೆಳಕಂಡ ಚಟುವಟಿಕೆಗಳನ್ನು ಶಾಲಾ ಮುಖ್ಯಸ್ಥರು ಹಮ್ಮಿಕೊಳ್ಳಲು ಕ್ರಮವಹಿಸಲು ಸೂಚಿಸಿದೆ.

- ಎಲ್ಲಾ ಶಾಲೆಗಳಲ್ಲಿ ದಿನಾಂಕ:26.11.2022ರಂದು ಬೆಳಿಗ್ಗೆ 11:00 ಗಂಟೆಗೆ ಏಕಕಾಲಕ್ಕೆ ಸಂವಿಧಾನದ ಪೀಠಿಕೆಯನ್ನು ಓದುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು
- ಶಾಲಾ ಆವರಣದಲ್ಲಿನ ಪ್ರಮುಖ ಸ್ಥಳದಲ್ಲಿ ಭಾರತ ಸಂವಿಧಾನದ ಪೀಠಿಕೆ ಮತ್ತು ಮೂಲಭೂತ ಕರ್ತವ್ಯಗಳ ಪ್ರದರ್ಶನ (ಸಂವಿಧಾನದ ಭಾಗ IV A ನಲ್ಲಿ ನಮೂದಿಸಿದಂತೆ)
- ಶಾಲೆಗಳಲ್ಲಿ ಸಂವಿಧಾನದ ವಿವಿಧ ಅಂಶಗಳ ಕುರಿತು ಚರ್ಚಾ ಸ್ಪರ್ಧೆ/ ರಸಪ್ರಶ್ನೆಗಳು / ಪ್ರಬಂಧ ಸ್ಪರ್ಧೆಗಳು ಇತ್ಯಾದಿ ಕಾರ್ಯಕ್ರಮವನ್ನು ದಿನಾಂಕ:26.11.2022ರ ಪೂರ್ವದಲ್ಲಿ ಹಮ್ಮಿಕೊಳ್ಳುವುದು

**(ಮಾನ್ಯ ಆಯುಕ್ತರ ಆದೇಶದಂತೆ)**

**ನಿರ್ದೇಶಕರು (ಪ್ರೌಢ ಶಿಕ್ಷಣ)**

ಗೆ,

1. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಂಬಂಧಿಸಿದ ಉಪನಿರ್ದೇಶಕರ ಮೂಲಕ ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು

ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಕಲುಬುರ್ಗಿ ಮತ್ತು ಧಾರವಾಡ ಇವರಿಗೆ ಮಾಹಿತಿಗಾಗಿ